# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ | 2124 |
| ಮಾನ್ಯ ಸದಸ್ಯರ ಹೆಸರು | ಶ್ರೀ ಕೆ.ಎ ತಿಪ್ಪೇಸ್ವಾಮಿ (ನಾಮ ನಿರ್ದೇಶನ ಹೊಂದಿದವರು) |
| ಉತ್ತರಿಸಬೇಕಾದ ದಿನಾಂಕ | 18.03.2022 |
| ಉತ್ತರಿಸುವ ಸಚಿವರು | ಹಿಂದುಳಿದ ವರ್ಗಗಳ ಕಲ್ಯಾಣ ಸಚಿವರು. |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕೇಂದ್ರ ಸರ್ಕಾರವು ಸಂವಿಧಾನದ 127ನೇ ತಿದ್ದುಪಡಿಯೊಂದಿಗೆ ಇತರೆ ಹಿಂದುಳಿದ ವರ್ಗಗಳ ಪಟ್ಟಿ ತಯಾರಿಕೆಯ ಅಧಿಕಾರವನ್ನು ರಾಜ್ಯ ಸರ್ಕಾರಗಳಿಗೆ ವಹಿಸಿರುವುದು ನಿಜವೇ; ಹಾಗಿದ್ದಲ್ಲಿ, ಈ ಬಗ್ಗೆ ವಿವರವನ್ನು ನೀಡುವುದು; | ಕೇಂದ್ರ ಸರ್ಕಾರವು ಸಂವಿಧಾನದ 127ನೇ ತಿದ್ದುಪಡಿಯೊಂದಿಗೆ ಇತರೆ ಹಿಂದುಳಿದ ವರ್ಗಗಳ ಪಟ್ಟಿ ತಯಾರಿಕೆಯ ಅಧಿಕಾರವನ್ನು ರಾಜ್ಯ ಸರ್ಕಾರಗಳಿಗೆ ವಹಿಸಿರುವುದು ಕೇಂದ್ರ ಸರ್ಕಾರದ ಗೆಜೆಟ್ ನಲ್ಲಿ ಪ್ರಕಟಿಸಲಾಗಿರುತ್ತದೆ.<br>ಮುಂದುವರೆದಂತೆ ಈ ಸಂಬಂಧದಲ್ಲಿ ಕೇಂದ್ರ ಸರ್ಕಾರದಿಂದಾಗಲೀ ಅಥವಾ ರಾಷ್ಟ್ರೀಯ ಹಿಂದುಳಿದ ವರ್ಗಗಳ ಆಯೋಗ, ನವದೆಹಲಿ ಇವರಿಂದಾಗಲೀ ಯಾವುದೇ ಮಾರ್ಗಸೂಚಿಗಳು ಸರ್ಕಾರದಲ್ಲಿ ಸ್ವೀಕೃತಗೊಂಡಿರುವುದಿಲ್ಲ. |
| ಆ) | ರಾಜ್ಯದಲ್ಲಿ ಹಿಂದುಳಿದ ವರ್ಗಗಳ ಪಟ್ಟಿಯನ್ನು ತಯಾರಿಸುವಲ್ಲಿ ಜಾತಿಯಾಧಾರಿತ ಆರ್ಥಿಕ ಸಮೀಕ್ಷೆಯು ಅಗತ್ಯವೆನ್ನುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ, ಈ ಬಗ್ಗೆ ರಾಜ್ಯ ಸರ್ಕಾರವು ಕೈಗೊಂಡಿರುವ ಕ್ರಮಗಳೇನು; | ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗದ ವತಿಯಿಂದ 2015ನೇ ಸಾಲಿನಲ್ಲಿ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯನ್ನು ಕೈಗೊಳ್ಳಲಾಗಿರುತ್ತದೆ. ಈ ಸಮೀಕ್ಷೆಯಲ್ಲಿ ರಾಜ್ಯದ ಎಲ್ಲಾ ನಾಗರಿಕರ ಸಾಮಾಜಿಕ, ಆರ್ಥಿಕ ಮತ್ತು ಶೈಕ್ಷಣಿಕ ಸ್ಥಿತಿಗತಿಗಳ ಹಾಗೂ ಇತ್ಯಾದಿ ವಿವರಗಳನ್ನು ಸಂಗ್ರಹಿಸಲಾಗಿರುತ್ತದೆ. |
| ಇ) | ರಾಜ್ಯದ ಒಟ್ಟು ಜನಸಂಖ್ಯೆಯಲ್ಲಿನ ಶೇ.52ರಷ್ಟು ಜನ ಹಿಂದುಳಿದ ವರ್ಗಕ್ಕೆ ಸೇರಿದ್ದಾರೆನ್ನುವ ಅಂಶವು ನಿಜವೇ; ಹಾಗಿದ್ದಲ್ಲಿ, ಅದರ ವಿವರವನ್ನು ನೀಡುವುದು; | ಶ್ರೀ ಹೆಚ್. ಕಾಂತರಾಜ ನೇತೃತ್ವದ ಕರ್ನಾಟಕ ರಾಜ್ಯ ಹಿಂದುಳಿದ ವರ್ಗಗಳ ಆಯೋಗವು 2015 ರಲ್ಲಿ ಕೈಗೊಳ್ಳಲಾಗಿದ್ದ ಸಾಮಾಜಿಕ ಮತ್ತು ಶೈಕ್ಷಣಿಕ ಸಮೀಕ್ಷೆಯ ವರದಿಯನ್ನು ಸರ್ಕಾರಕ್ಕೆ ಸಲ್ಲಿಸಿರುವುದಿಲ್ಲ. ಹಿಂದುಳಿದ ವರ್ಗಗಳ ಜನಸಂಖ್ಯೆಯ ಮಾಹಿತಿಯು ಲಭ್ಯವಿರುವುದಿಲ್ಲ. |

ಸಂಖ್ಯೆ: ಹಿಂವಕ 67 ಬಿಸಿಎ 2022

(ಕೋಟಾ ಶ್ರೀನಿವಾಸ ಪೂಜಾರಿ)
ಸಮಾಜ ಕಲ್ಯಾಣ ಮತ್ತು ಹಿಂದುಳಿದ ವರ್ಗಗಳ
ಕಲ್ಯಾಣ ಸಚಿವರು